ಪಿ.ಡಬ್ಲೂಃ 1

ದಿನಾಂಕಃ 24.02.2025 ರಂದು ಸಾಕ್ಷಿಯನ್ನು ಕರೆಯಿಸಲಾಯಿತು ಮತ್ತು ಪ್ರಮಾಣ ವಚನ ಭೋದಿಸಲಾಯಿತು.

ಮುಖ್ಯ ವಿಚಾರಣೆಃ- ಅರ್ಜಿದಾರರ ಪರ Smt. RMK, ವಕೀಲರಿಂದ

ನಾನು ನನ್ನ ಮುಖ್ಯ ವಿಚಾರಣೆ ಸಾಕ್ಷ್ಯವನ್ನು ಪ್ರಮಾಣಪತ್ರದ ಮೂಲಕ ಸಲ್ಲಿಸಿದ್ದು ಸದರಿ ಸಾಕ್ಷಿ ಪ್ರಮಾಣಪತ್ರದಲ್ಲಿ ಬರೆದ ಎಲ್ಲ ಸಂಗತಿಗಳು ನನ್ನ ಮಾಹಿತಿ ಮತ್ತು ತಿಳುವಳಿಕೆ ಪ್ರಕಾರ ಸರಿ ಮತ್ತು ಸತ್ಯವಾಗಿರುತ್ತವೆ ನಾನು ಸಾಕ್ಷಿ ಪ್ರಮಾಣಪತ್ರಕ್ಕೆ ಸಹಿ ಮಾಡಿರುತ್ತೇನೆ. ನನ್ನ ದಾವೆಗೆ ಪೂರಕವಾಗಿ ದಾಖಲೆಗಳನ್ನು ಹಾಜರುಪಡಿಸಿರುತ್ತೇನೆ ಅವುಗಳನ್ನು ನನ್ನ ಪರವಾಗಿ ನಿಶಾನೆಯಾಗಿ ಗುರುತಿಸಲು ವಿನಂತಿ ಪ್ರಾರ್ಥನೆ ಇರುತ್ತದೆ.

1. ಎದುರುದಾರರು ನೀಡಿರುವ ಅಲಭ್ಯ ಪ್ರಮಾಣಪತ್ರವನ್ನು ಹಾಜರುಪಡಿಸಿರುತ್ತೇನೆ. ಅದನ್ನು ನಿಪಿ.1 ಎಂದು ಗುರುತಿಸಲಾಯಿತು.

2. ಶಿರಹಟ್ಟಿ ತಹಶೀಲ್ದಾರ ರವರು ನೀಡಿರುವ ಜೀವಂತ ಸದಸ್ಯರ ದೃಡಿಕೃತ ಪ್ರಮಾಣಪತ್ರವನ್ನು ಹಾಜರುಪಡಿಸಿರುತ್ತೇನೆ. ಅದನ್ನು ನಿಪಿ.2 ಎಂದು ಗುರುತಿಸಲಾಯಿತು.

3. ಚನ್ನಬಸಪ್ಪ ರವರ ಮರಣ ಪ್ರಮಾಣಪತ್ರದ ದೃಡಿಕೃತ ನಕಲನ್ನು ಹಾಜರುಪಡಿಸಿರುತ್ತೇನೆ. ಅದನ್ನು ನಿಪಿ.3 ಎಂದು ಗುರುತಿಸಲಾಯಿತು. ಮೂಲ ಪ್ರತಿಯೊಂದಿಗೆ ತಾಳೆ ಮಾಡಿ ಮೂಲ ಪ್ರತಿಯನ್ನು ಅರ್ಜಿದಾರರಿಗೆ ಹಿಂತಿರುಗಿಸಲಾಯಿತು.

4. ನನ್ನ ಹಾಗು ಉಳಿದ ಅರ್ಜಿದಾರರ ನೋಟರಿಕೃತ ಆಧಾರ ಕಾರ್ಡನ ಪ್ರತಿಗಳನ್ನು ಹಾಜರುಪಡಿಸಿರುತ್ತೇನೆ. ಅವುಗಳನ್ನು ಕ್ರಮವಾಗಿ ನಿಪಿ.4 ರಿಂದ

ನಿಪಿ.7 ಎಂದು ಗುರುತಿಸಲಾಯಿತು. ಆಧಾರ ಕಾರ್ಡನ ಮೂಲ ಪ್ರತಿಯೊಂದಿಗೆ ತಾಳೆ ಮಾಡಿ ಮೂಲ ಪ್ರತಿಯನ್ನು ಅರ್ಜಿದಾರರಿಗೆ ಹಿಂತಿರುಗಿಸಲಾಯಿತು.

5. ದಿಃ 28.12.2024 ರಂದು ನವೋದಯ ಮತ್ತು ದಿಃ 21.12.2024 ರಂದು ಕಿತ್ತೂರ ಕರ್ನಾಟಕ ದಿನಪತ್ರಿಕೆಯಲ್ಲಿ ನೋಟಿಸನ್ನು ಹೊರಡಿಸಿದ್ದು ಅದರ ಪ್ರತಿಗಳನ್ನು ಹಾಜರುಪಡಿಸಿರುತ್ತೇನೆ. ಅವುಗಳನ್ನು ಕ್ರಮವಾಗಿ ನಿಪಿ.8 ಮತ್ತು ನಿಪಿ.9 ಎಂದು ಗುರುತಿಸಲಾಯಿತು.

ಆದ್ದರಿಂದ ಅರ್ಜಿಯಲ್ಲಿ ಪಾರ್ಥಿಸಿದಂತೆ ಆದೇಶ ಮಾಡಬೇಕು ಎಂದು ವಿನಂತಿಸಿಕೊಳ್ಳುತ್ತೇನೆ.

**ಪಾಟೀ ಸವಾಲು:-** ಎದುರುದಾರರು ಏಕತರ್ಪಿಯಾಗಿರುವುದರಿಂದ ಪಾಟೀ ಸವಾಲು ಇಲ್ಲ ಎಂದು ತೆಗೆದುಕೊಳ್ಳಲಾಯಿತು.

ಮರು ವಿಚಾರಣೆ ಇಲ್ಲ

(ನನ್ನ ಉಕ್ತ ಲೇಖನದಂತೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು)

ಓದಿ ಹೇ. ಕೇ. ಸರಿ ಅದೆ.

ದಿವಾಣಿ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ. ಲಕ್ಷ್ಮೇಶ್ವರ